ಅ) ಬೇಲೂರು ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ಅರಸೀಕೆರೆ ತಾಲ್ಲೂಕು ಜಾವಗಲ್ ಗ್ರಾಮದಲ್ಲಿ ಜಾವಗಲ್ ಶ್ರೀನಾಥ್ ಕ್ರೀಡಾಂಗಣ ಇರುವುದು ನಿಜವೇ;

ಆ) ಈ ಕ್ರೀಡಾಂಗಣ ಕಾಮಗಾರಿಯು ಯಾವಾಗ ಪ್ರಾರಂಭವಾಯಿತು; ಇದಕ್ಕೆ ನಿಗದಿಪಡಿಸಿದ ಅನುದಾನವೆಷ್ಟು;

ಇ) ಈ ಕ್ರೀಡಾಂಗಣ ಕಾಮಗಾರಿಗೆ ಖರ್ಚಾದ ಹಣವೆಷ್ಟು;

ಈ) ಕ್ರೀಡಾಂಗಣ ಈಗ ಯಾವ ಹಂತದಲ್ಲಿದೆ;

ಉ) ಕ್ರೀಡಾಂಗಣದಲ್ಲಿ ಕ್ರೀಡಾಪಟುಗಳಿಗೆ ಹಾಗೂ ಪ್ರೇಕ್ಷಕರಿಗೆ ಮೂಲಭೂತ ಸೌಲಭ್ಯ ಒದಗಿಸಲಾಗಿದೆಯೇ?

ಶ್ರೀ ಜಿ. ಜನಾರ್ಧನ ರೆಡ್ಡಿ (ಪ್ರವಾಸೋದ್ಯಮ, ಮೂಲಭೂತ ಸೌಲಭ್ಯ ಅಭಿವೃದ್ಧಿ ಹಾಗೂ ಯುವಜನ ಸೇವಾ ಸಚಿವರು):

ಅ) ಹೌದು.

ಆ) ಕ್ರೀಡಾಂಗಣ ಕಾಮಗಾರಿಯು ದಿನಾಂಕ:20–02–1997ರಂದು ಪ್ರಾರಂಭವಾಯಿತು. ರೂ.14.50 ಲಕ್ಷಗಳ ಅಂದಾಜು ವೆಚ್ಚದಲ್ಲಿ ಪೆವಿಲಿಯನ್ ಬ್ಲಾಕ್ ಮತ್ತು ಜಿಮ್ನಾಷಿಯಂ ಬ್ಲಾಕ್ ನಿರ್ಮಿಸಲಾಗಿದೆ.

ಇ) ರೂ.14.50 ಲಕ್ಷಗಳು.

ಈ) ಪೆವಿಲಿಯನ್ ಬ್ಲಾಕ್ ಮತ್ತು ಜಿಮ್ನಾಷಿಯಂ ಬ್ಲಾಕ್ ಪೂರ್ಣಗೊಂಡಿರುತ್ತದೆ.

ಉ) ಹೌದು.

ಪುರಸಭೆಗೆ ಒದಗಿಸಿರುವ ಹಣದ ವಿವರ

56 (75) ಶ್ರೀ ವೈ.ಎನ್. ರುದ್ರೇಶ್ ಗೌಡ (ಬೇಲೂರು): ಮಾನ್ಯ ನಗರಾಭಿವೃದ್ಧಿ, ಕಾನೂನು, ನ್ಯಾಯ, ಮಾನವಹಕ್ಕುಗಳು, ಹಾಗೂ ಸಂಸದೀಯ ವ್ಯವಹಾರಗಳು, ಮತ್ತು ಶಾಸನ ರಚನೆ, ಪೌರಾಡಳಿತ, ಮತ್ತು ಸ್ಥಳೀಯ ಸಂಸ್ಥೆಗಳು, ಹಾಗೂ ಬೆಂಗಳೂರು ಜಲಮಂಡಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಬೇಲೂರು ಪುರಸಭೆಗೆ ಮಾನ್ಯ ಮುಖ್ಯ ಮಂತ್ರಿಗಳ ಸಣ್ಣ ನಗರ ಪಟ್ಟಣಗಳ ಅಭಿವೃದ್ಧಿ ಯೋಜನೆಯಲ್ಲಿ ಹಣ ಒದಗಿಸಿರುವುದು ನಿಜವೇ;

ಆ) ಹಾಗಿದ್ದಲ್ಲಿ, ಎಷ್ಟು ಹಣ ಒದಗಿಸಲಾಗಿದೆ;

ಇ) ಈ ಕಾಮಗಾರಿಗಳು ಗುಣಮಟ್ಟ ಕಾಯ್ದುಕೊಂಡಿಲ್ಲ ಎಂಬ ಬಗ್ಗೆ ದೂರು ಬಂದಿರುವುದು ನಿಜವೇ;

ಈ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ, ಮಾನವಹಕ್ಕುಗಳು, ಹಾಗೂ ಸಂಸದೀಯ ವ್ಯವಹಾರಗಳು, ಮತ್ತು ಶಾಸನ ರಚನೆ, ಪೌರಾಡಳಿತ, ಮತ್ತು ಸ್ಥಳೀಯ ಸಂಸ್ಥೆಗಳು, ಹಾಗೂ ಬೆಂಗಳೂರು ಜಲಮಂಡಳಿ ಸಚಿವರು):

ಅ) ಹೌದು.

ಆ) ಬೇಲೂರು ಪುರಸಭೆಗೆ ಸಿಎಂಎಸ್ಎಂಟಿಡಿಪಿ ಯೋಜನೆಯಡಿ ರೂ.500.00 ಲಕ್ಷಗಳ ಅನುದಾನ ಹಂಚಿಕೆಯಾಗಿದ್ದು, ಈಗಾಗಲೇ ರೂ.333.20 ಲಕ್ಷಗಳನ್ನು ಬಿಡುಗಡೆಗೊಳಿಸಲಾಗಿದೆ.

ಇ) ಇಲ್ಲ.

ಈ) ಉದ್ಭವಿಸುವುದಿಲ್ಲ.

ಪ್ರವಾಸೋದ್ಯಮ ಅಭಿವೃದ್ಧಿಗೆ ಬಿಡುಗಡೆಯಾದ ಹಣದ ವಿವರ

57 (77) ಶ್ರೀ ರುದ್ರೇಶ್ ಗೌಡ ವೈ.ಎನ್(ಬೇಲೂರು): ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಹಾಗೂ ಯುವಜನ ಸೇವೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) 2010–11ನೇ ಸಾಲಿನಲ್ಲಿ ರಾಜ್ಯದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ಮಂಜೂರಾಗಿರುವ ಹಣವೆಷ್ಟು;

ಆ) ಹಾಗಿದ್ದಲ್ಲಿ, ಪ್ರವಾಸಿ ಕೇಂದ್ರಗಳ ರಸ್ತೆಗಳ ಅಭಿವೃದ್ಧಿಗೆ ಹಣ ವಿನಿಯೋಗಿಸಲಾಗಿದೆಯೇ (ವಿವರ ನೀಡುವುದು);

ಇ) ಹಾಗಿಲ್ಲದಿದ್ದಲ್ಲಿ, ಕಾರಣಗಳೇನು?

ಶ್ರೀ ಜನಾರ್ಧನ ರೆಡ್ಡಿ (ಪ್ರವಾಸೋದ್ಯಮ, ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಹಾಗೂ ಯುವಜನ ಸೇವಾ ಸಚಿವರು):

ಅ) ಪ್ರವಾಸೋದ್ಯಮ ಅಭಿವೃದ್ಧಿಗೆ ಯೋಜನಾ ವೆಚ್ಚವಾಗಿ ರೂ.225.47 ಕೋಟಿಗಳ ಅನುದಾನವನ್ನು 2010–11ನೇ ಸಾಲಿನಲ್ಲಿ ಒದಗಿಸಲಾಗಿದೆ.

ಆ) ಹೌದು. 12 ಪ್ರವಾಸಿ ಕೂಡುರಸ್ತೆಗಳ ಅಭಿವೃದ್ಧಿಗಾಗಿ ರೂ.11,80,15,000/–ಗಳನ್ನು ವಿನಿಯೋಗಿಸಲಾಗಿದೆ. ವಿವರದ ಪಟ್ಟಿ ಲಗತ್ತಿಸಿದೆ.

ಇ) ಉದ್ಭವಿಸುವುದಿಲ್ಲ.